240

# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2033
2. ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ. ರಾಥೋಡ್
3. ಉತ್ತರಿಸುವ ದಿನಾಂಕ : 17-03-2022
4. ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಬೆಂಗಳೂರಿನ ಸರ್.ಸಿ.ವಿ.ರಾಮನ್‌ನಗರ ವಿಧಾನಸಭಾ ಕ್ಷೇತ್ರದ ವಾರ್ಡ್-79ರ ಕದಿರನಪಾಳ್ಯ, ಇಂದಿರಾನಗರ ದಲ್ಲಿರುವ ಬಿ.ಬಿ.ಎಂ.ಪಿ. ವಸತಿಗೃಹವು ಬೀಳುವ ಹಂತದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ | ಬಂದಿದ್ದಲ್ಲಿ, ಸದರಿ ವಸತಿ ಗೃಹವನ್ನು ಯಾವಾಗ ಪುನರ್ ನಿರ್ಮಾಣ ಮಾಡಲಾಗುವುದು; (ವಿವರ ನೀಡುವುದು) | ವಸತಿ ಸಮುಚ್ಚಯದ ಪುನರ್ ನಿರ್ಮಾಣಕ್ಕೆ 2022-23ನೇ ಸಾಲಿನ ಪಾಲಿಕೆಯ ಆಯವ್ಯಯದಲ್ಲಿ ರೂ. 15.00 ಕೋಟಿಗಳ ಅನುದಾನವನ್ನು ಮೀಸಲಿರಿಸುವ ಬಗ್ಗೆ ನಿಯಮಾನುಸಾರ ಪರಿಶೀಲಿಸಲಾಗುತ್ತಿದ್ದು, ಆಯವ್ಯಯದಲ್ಲಿ ಅನುದಾನ ಹಂಚಿಕೆಯಾದ ನಂತರ ಪುನರ್ ನಿರ್ಮಾಣ ಮಾಡುವ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು. |
| ಇ | ಸದರಿ ವಸತಿ ಗೃಹಗಳಲ್ಲಿ ವಾಸಿಸುತ್ತಿರುವ ಪೌರಕಾರ್ಮಿಕರಿಗೆ ತುರ್ತಾಗಿ ಬೇರೆ ವಸತಿ ಗೃಹಗಳನ್ನು ನೀಡುವ ಯೋಚನೆ ಸರ್ಕಾರದ ಗಮನಕ್ಕೆ ಬಂದಿದೆಯೇ; | ಪಾಲಿಕೆಯ ವಾರ್ಡ್ ಸಂಖ್ಯೆ: 79, ಸರ್ವಜ್ಞನಗರ ವ್ಯಾಪ್ತಿಯ ಕದಿರಯ್ಯನ ಪಾಳ್ಯದಲ್ಲಿರುವ ಪಾಲಿಕೆಯ ವಸತಿ ಗೃಹಗಳನ್ನು ಸುಮಾರು 40 ವರ್ಷಗಳ ಹಿಂದೆ ನಿರ್ಮಾಣ ಮಾಡಿದ್ದು, ಸದರಿ ವಸತಿಗೃಹಗಳು ಶಿಥಿಲಾವಸ್ಥೆಗೆ ತಲುಪಿದ್ದು, ಸದರಿ ವಸತಿಗೃಹಗಳಲ್ಲಿ ವಾಸಿಸುತ್ತಿರುವ ಪೌರಕಾರ್ಮಿಕರು ಹಾಗೂ ಪಾಲಿಕೆಯ ಇತರೇ ಸಿಬ್ಬಂದಿಗಳಿಗೆ ಹಂಚಿಕೆ ಮಾಡಿರುವ ಹಂಚಿಕೆ ಆದೇಶಗಳನ್ನು ರದ್ದುಗೊಳಿಸಿ, ನಿವಾಸಿಗಳನ್ನು ತೆರವುಗೊಳಿಸಲು ಕ್ರಮವಹಿಸಲಾಗುತ್ತಿರುತ್ತದೆ. |
| ಈ | ಸದರಿ ವಸತಿ ಗೃಹಗಳನ್ನು ನೆಲಸಮ ಮಾಡಿ, ನಿವೇಶನವನ್ನು ಪೌರಕಾರ್ಮಿಕರಿಗೆ ನೀಡುವ ಯೋಜನೆ ಸರ್ಕಾರದ ಮುಂದಿದೆಯೇ? | ಅಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |

ಸಂಖ್ಯೆ: ನಅಇ 62 ಬಿಬಿಎಲ್ 2022(ಇ)

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ